# 16. ಬರಗು

ಸಿರಿಧಾನ್ಯಗಳಲ್ಲಿ ಒಂದಾದ ಬರಗು ಬರ ನಿರೋಧಕ ಬೆಳೆಯಾಗಿಯೂ ಹಾಗೂ ಪೌಷ್ಟಿಕಾಂಶಭರಿತ ಆಹಾರವಾಗಿಯೂ ಬಳಕೆಯಲ್ಲಿದೆ. ಮಳೆಯಾಶ್ರಿತ ಹಾಗೂ ನೀರಾವರಿ ಆಶ್ರಯದಲ್ಲಿ ಹೆಚ್ಚು ಖರ್ಚಿಲ್ಲದೆ ಬೆಳೆಯುವ ಬೆಳೆ. ನಮ್ಮ ರಾಜ್ಯದಲ್ಲಿ ವಿರಳವಾಗಿ ಬೆಳೆಯಲಾಗುತ್ತಿದೆ. ಈ ಬೆಳೆಯನ್ನು ಮುಂಗಾರಿನಲ್ಲಿ ಕಡಿಮೆ ಮಳೆಯಾಗುವ ಪ್ರದೇಶದಲ್ಲಿ ಬೆಳೆಯಬಹುದು.

**ತಳಿಗಳು ಮತ್ತು ವಿಶೇಷ ಗುಣಗಳು**

| ತಳಿಗಳು | ಬಿತ್ತನೆ ಕಾಲ | ಕಾಲಾವಧಿ (ದಿನಗಳು) | ಇಳುವರಿ (ಕ್ವಿಂ / ಎ) | ವಿಶೇಷ ಗುಣಗಳು |
|---|---|---|---|---|
| ಜಿ.ಪಿ.ಯು.ಪಿ 21 | ಮೇ–ಜುಲೈ | 65–75 | ಧಾನ್ಯ: 4.8–6.0<br>ಮೇವು: 1.8–2.0 ಟನ್ | ಕಾಳು ಸಿಡಿಯುವಿಕೆಗೆ ನಿರೋಧಕ ಶಕ್ತಿ ಹೊಂದಿದ್ದು, ಬೇಗನೆ ಕಟಾವಿಗೆ ಬರುತ್ತದೆ. |
| ಜಿ.ಪಿಯು.ಪಿ 8 | | 85–90 | ಧಾನ್ಯ: 8.0–8.8<br>ಮೇವು: 2.0–2.4 ಟನ್ | ತೆನೆಗಳು ದಟ್ಟವಾಗಿ ಕಾಳು ಕಟ್ಟಿ ಅಧಿಕ ಇಳುವರಿಯನ್ನು ಕೊಡುತ್ತದೆ. ಸುಳಿ ನೊಣ ನಿರೋಧಕ ಶಕ್ತಿ ಹೊಂದಿದೆ. |

**ಬೇಸಾಯಕ್ಕೆ ಬೇಕಾಗುವ ಸಾಮಗ್ರಿಗಳು (ಎಕರೆಗೆ)**

| ಸಾಮಗ್ರಿಗಳು | ಪ್ರಮಾಣ |
|---|---|
| ಬಿತ್ತನೆ ಬೀಜ (ಕಿ.ಗ್ರಾಂ) | 3–4 |
| ಕೊಟ್ಟಿಗೆ ಗೊಬ್ಬರ ಅಥವಾ ಕಾಂಪೋಸ್ಟ್ (ಟನ್) | 2.5 |
| **ರಸಾಯನಿಕ ಗೊಬ್ಬರಗಳು (ಕಿ.ಗ್ರಾಂ)** | |
| ಸಾರಜನಕ | 8 |
| ರಂಜಕ | 8 |

**ಬಿತ್ತನೆ ಮತ್ತು ಬೇಸಾಯ:**

- ಬಿತ್ತನೆಗೆ 3–4 ವಾರಗಳ ಮುಂಚೆ ಕೊಟ್ಟಿಗೆ ಗೊಬ್ಬರವನ್ನು ಮಣ್ಣಿನಲ್ಲಿ ಸೇರಿಸುವುದು.
- ಬಿತ್ತನೆ ಬೀಜವನ್ನು ಸಾಲಿನಿಂದ ಸಾಲಿಗೆ 12 ಅಂಗುಲ, ಗಿಡದಿಂದ ಗಿಡಕ್ಕೆ 3–4 ಅಂಗುಲ ಅಂತರದ ಸಾಲುಗಳಲ್ಲಿ 2 ಅಂಗುಲಕ್ಕಿಂತ ಹೆಚ್ಚು ಆಳವಿಲ್ಲದಂತೆ ಬಿತ್ತುವುದು.
- ಶಿಫಾರಸ್ಸು ಮಾಡಿದ ರಸಗೊಬ್ಬರಗಳಾದ ಸಾರಜನಕ ಮತ್ತು ರಂಜಕವನ್ನು ಬಿತ್ತನೆ ಸಮಯದಲ್ಲಿ ಕೊಡುವುದು.
- ಕಳೆ ನಿರ್ವಹಣೆಗಾಗಿ 2–3 ಬಾರಿ ಅಂತರ ಬೇಸಾಯ ಮಾಡುವುದು ಹಾಗು ಬಿತ್ತನೆಯಾದ 30 ದಿನಗಳ ನಂತರ ಒಂದು ಬಾರಿ ಕೈಯಿಂದ ಕಳೆ ತೆಗೆಯುವುದು.

**ಸಸ್ಯ ಸಂರಕ್ಷಣೆ :** ತಡವಾಗಿ ಬಿತ್ತನೆ ಮಾಡಿದ ಬೆಳೆಗೆ ಸುಳಿ ನೊಣದ ಬಾಧೆ ಕಾಣಿಸಿಕೊಳ್ಳುತ್ತದೆ. ಮುಂಗಾರಿನ ಪ್ರಾರಂಭದಲ್ಲೇ ಬಿತ್ತನೆ ಮಾಡುವುದರಿಂದ ಈ ಕೀಟದ ಬಾಧೆಯನ್ನು ತಡೆಗಟ್ಟಬಹುದು.

**ಮುಖ್ಯವಾದ ಕಡಿಮೆ ಖರ್ಚಿನ ಬೇಸಾಯ ಕ್ರಮಗಳು**

- ಕೂರಿಗೆ ಸಹಾಯದಿಂದ ಸಾಲಿನಲ್ಲಿ ಬಿತ್ತನೆ ಮಾಡುವುದು.
- ಬೀಜವನ್ನು ಶಿಫಾರಸ್ಸು ಮಾಡಿದ ಅಂತರದಲ್ಲಿ ಬಿತ್ತುವುದು.